# SSLC Science Question Bank 1

### ಬೆಳಕು, ಪ್ರತಿಫಲನ ಮತ್ತು ವಕ್ರೀಭವನ / ವಿದ್ಯುಚ್ಛಕ್ತಿ ಪಾಠಗಳಿಂದ ಪ್ರಶ್ನೆಗಳು:

## Light, reflection and refraction / Electricity

**1. ಬೆಳಕಿನ ವಕ್ರೀಭವನದ ನಿಯಮಗಳನ್ನು ನಿರೂಪಿಸಿ.**

1ನೇ ನಿಯಮ – ಪತನ ಕಿರಣ, ವಕ್ರಿಮ ಕಿರಣ ಹಾಗೂ ಪತನ ಬಿಂದುವಿನಲ್ಲಿ ಎಳೆದ ಲಂಬ ಇವು ಒಂದೇ ಸಮತಲದಲ್ಲಿ ಇರುತ್ತವೆ.

2ನೇ ನಿಯಮ – ಎರಡು ಭಿನ್ನ ಮಾಧ್ಯಮಗಳಿಗೆ ಸಂಬಂಧಿಸಿದಂತೆ ಪತನಕೋನದ ಸೈನು ಮತ್ತು ವಕ್ರಿಮ ಕೋನದ ಸೈನುಗಳ ನಿಷ್ಪತ್ತಿಯು (ಅನುಪಾತ) ಸ್ಥಿರವಾಗಿರುತ್ತದೆ.

**2. ಒಂದು ಪೀನ ಮಸೂರದ ಪ್ರಧಾನ ಸಂಗಮವನ್ನು ನಿರೂಪಿಸಿ.**

ಪೀನ ಮಸೂರದ ಮೇಲೆ ಪ್ರಧಾನ ಅಕ್ಷಕ್ಕೆ ಸಮಾಂತರವಾಗಿ ಪತನವಾಗುವ ಬೆಳಕಿನ ಕಿರಣಗಳು ವಕ್ರೀಭವಿಸಿದ ನಂತರ ಪ್ರಧಾನ ಅಕ್ಷದ ಒಂದು ಬಿಂದುವಿನಲ್ಲಿ ಕೇಂದ್ರೀಕರಿಸುತ್ತವೆ. ಈ ಬಿಂದುವನ್ನು ಪೀನ ಮಸೂರದ ಪ್ರಧಾನ ಸಂಗಮ ಎಂದು ಕರೆಯುವರು.

**3. ಬೆಳಕು ಒಂದು ಮಾಧ್ಯಮದಿಂದ ಇನ್ನೊಂದು ಮಾಧ್ಯಮಕ್ಕೆ ಚಲಿಸಿದಾಗ ವಕ್ರೀಭವನಗೊಳ್ಳದೆ ಇರುವ ಸಂದರ್ಭ ತಿಳಿಸಿ.**

* ಪತನ ಕೋನವು ಮಾಧ್ಯಮಕ್ಕೆ ಲಂಬವಿದ್ದಾಗ

* ಎರಡೂ ಮಾಧ್ಯಮಗಳ ವಕ್ರೀಭವನ ಸೂಚ್ಯಾಂಕ ಒಂದೇ ಇದ್ದಾಗ.

**4. ಗಾಳಿಯಲ್ಲಿ ಚಲಿಸುತ್ತಿರುವ ಬೆಳಕಿನ ಒಂದು ಕಿರಣವು ಓರೆಯಾಗಿ ನೀರನ್ನು ಪ್ರವೇಶಿಸುತ್ತದೆ. ಬೆಳಕಿನ ಕಿರಣವು ಲಂಬದ ಕಡೆಗೆ ಬಾಗುವುದೊ ಅಥವಾ ಲಂಬದಿಂದ ದೂರ ಬಾಗುವುದೋ? ಏಕೆ?**

ಬೆಳಕಿನ ಕಿರಣವು ಲಂಬದ ಕಡೆಗೆ ಬಾಗುವುದು. ಏಕೆಂದರೆ ಇಲ್ಲಿ ಬೆಳಕು ವಿರಳ (ಗಾಳಿ) ಮಾಧ್ಯಮದಿಂದ ಸಾಂದ್ರ (ನೀರು) ಮಾಧ್ಯಮದ ಕಡೆಗೆ ಚಲಿಸಿದೆ.

**5. ಮಸೂರದ ಸಾಮರ್ಥ್ಯ ಎಂದರೇನು ? ಅದರ SI ಮಾನ ತಿಳಿಸಿ.**

ಮಸೂರದ ಮೂಲಕ ಬರುವ ಬೆಳಕಿನ ಕಿರಣಗಳನ್ನು ಕೇಂದ್ರೀಕರಿಸುವ ಅಥವಾ ವಿಕೇಂದ್ರೀಕರಿಸುವ ಮಟ್ಟವನ್ನು ಮಸೂರದ ಸಾಮರ್ಥ್ಯ ಎನ್ನುವರು. ಅದರ SI ಮಾನ 'ಡಯಾಪ್ಟರ್'

**6. ಒಂದು ವಾಹಕದ ರೋಧವು 27 Ω ಆಗಿದೆ. ಅದನ್ನು ಮೂರು ಸಮಭಾಗಗಳಾಗಿ ಕತ್ತರಿಸಿ ಸಮಾಂತರವಾಗಿ ಜೋಡಿಸಿದಾಗ ಅದರ ಒಟ್ಟು ರೋಧ .....................**

A] 6 Ω     **B] 3 Ω**     C] 9 Ω     D] 27 Ω

**7. ವಿದ್ಯುತ್ ಉಪಕರಣಗಳನ್ನು ಸರಣಿ ಕ್ರಮದಲ್ಲಿ ಜೋಡಿಸುವುದಕ್ಕಿಂತ ಸಮಾಂತರ ಕ್ರಮದಲ್ಲಿ ಜೋಡಿಸುವುದು ಅನುಕೂಲಕರ ಏಕೆ?**

# ಸಮಾಂತರ ಜೋಡಣೆಯಲ್ಲಿ ವಿದ್ಯುತ್ ಉಪಕರಣಗಳಮೂಲಕ ಹರಿಯುವ ವಿದ್ಯುತ್ ವಿಭಜಿಸುತ್ತದೆ.

# ಸಮಾಂತರ ಜೋಡಣೆಯಲ್ಲಿ ವಿದ್ಯುತ್ ರೋಧ ಕಡಿಮೆ.

# ಈ ಜೋಡಣೆಯಲ್ಲಿ ಒಂದು ಉಪಕರಣ ಹಾಳಾದರೆ ಉಳಿದವುಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.

**8. ಜೌಲನ ಉಷ್ಣೋತ್ಪಾದನ ನಿಯಮದ ಪ್ರಕಾರ ರೋಧಕದಲ್ಲಿ ಉತ್ಪತ್ತಿಯಾಗುವ ಉಷ್ಣವು ಅವಲಂಬಿಸಿರುವ ಅಂಶಗಳನ್ನು ತಿಳಿಸಿ. ಈ ನಿಯಮದ ಪ್ರಕಾರ ಬಿಡುಡೆಯಾದ ಉಷ್ಣವನ್ನು ಲೆಕ್ಕಾಚಾರ ಮಾಡಲು ಉಪಯೋಗಿಸುವ ಸೂತ್ರವನ್ನು ಬರೆಯಿರಿ.**

* ವಾಹಕದಲ್ಲಿ ಪ್ರವಹಿಸುತ್ತಿರುವ ವಿದ್ಯುತ್ ಪ್ರವಾಹದ ಪರಿಮಾಣ.

* ವಾಹಕದ ರೋಧ.

* ವಿದ್ಯುತ್ ಪ್ರವಾಹದ ಕಾಲ.

* ಬಿಡುಡೆಯಾದ ಉಷ್ಣವನ್ನು ಲೆಕ್ಕಾಚಾರ ಮಾಡಲು ಉಪಯೋಗಿಸುವ ಸೂತ್ರ $H = I^2Rt$.

**9. ವಿದ್ಯುತ್ ವಿಭವಾಂತರವನ್ನು ನಿರೂಪಿಸಿ. ಅಮ್ಮೀಟರನ್ನು ವಿದ್ಯುತ್ ಮಂಡಲದಲ್ಲಿ ಹೇಗೆ ಸಂಪರ್ಕಿಸುತ್ತಾರೆ?**

* ಒಂದು ಏಕಮಾನ ಆವೇಶವನ್ನು ಒಂದು ಬಿಂದುವಿನಿಂದ ಇನ್ನೊಂದು ಬಿಂದುವಿಗೆ ತರವಲ್ಲಿ ನಡೆದ ಕೆಲಸವನ್ನು ವಿಭವಾಂತರ ಎನ್ನುವರು.

* ಅಮ್ಮೀಟರನ್ನು ವಿದ್ಯುತ್ ಮಂಡಲದಲ್ಲಿ ಯಾವಾಗಲೂ ಸರಣಿ ಕ್ರಮದಲ್ಲಿ ಅಳವಡಿಸಿರುತ್ತಾರೆ.

**10. ಒಂದು ವಿದ್ಯುತ್ ಮಂಡಲದಲ್ಲಿ ಫ್ಯೂಸ್ ಹಾಗೂ ವಿದ್ಯುತ್ ಬಲ್ಬ್‌ಗಳಿಗೆ ವಿದ್ಯುತ್ ಪ್ರವಾಹದ ಉಷ್ಣೋತ್ಪಾದನಾ ಪರಿಣಾಮದ ಪ್ರಾಯೋಗಿಕ ಅನ್ವಯವು ಹೇಗೆ ಉಪಯೋಗವಾಗಿದೆ? ವಿವರಿಸಿ.**

* ನಿಗದಿತ ಪ್ರಮಾಣಕ್ಕಿಂತ ಹೆಚ್ಚಿನ ಪ್ರಮಾಣದ ವಿದ್ಯುತ್ ಪ್ರವಹಿಸಿದಾಗ ಉಷ್ಣೋತ್ಪಾದನ ಪರಿಣಾಮದಿಂದ ಫ್ಯೂಸ್ ತಂತಿಯು ಕರಗಿ ಮಂಡಲವನ್ನು ಕಡಿತಗೊಳಿಸುತ್ತದೆ.

* ವಿದ್ಯುತ್ ಬಲ್ಬ್‌ನಲ್ಲಿ ಬಳಸುವ ಟಂಗಸ್ಟನ್ ಅತ್ಯಧಿಕ ರೋಧವನ್ನು ಹೊಂದಿದ್ದು ಹೆಚ್ಚಿನ ಉಷ್ಣ ಉತ್ಪಾದನೆಯಾಗಿ ಬೆಳಕನ್ನು ಉತ್ಸರ್ಜಿಸುತ್ತದೆ.

**11. ಓಮ್‌ನ ನಿಯಮವನ್ನು ನಿರೂಪಿಸಿ.**

ಸ್ಥಿರ ತಾಪದಲ್ಲಿ ವಾಹಕ ತಂತಿಯ ತುದಿಗಳ ನಡುವಿನ ವಿಭವಾಂತರವು ಅದರ ಮೂಲಕ ಹರಿಯುವ ವಿದ್ಯುತ್ ಪ್ರವಾಹಕ್ಕೆ ನೇರ ಅನುಪಾತದಲ್ಲಿರುತ್ತದೆ.

**12. ವಾಹಕದ ರೋಧವು ಯಾವ ಅಂಶಗಳ ಮೇಲೆ ಅವಲಂಬಿತವಾಗಿದೆ ಎಂಬುದನ್ನು ವಿವರಿಸಿ.**

* ವಾಹಕದ ಉದ್ದ

* ವಾಹಕದ ಅಡ್ಡಸೆಲೆ (ದಪ್ಪ)

* ವಾಹಕದ ಪ್ರಾಕೃತಿಕ ಗುಣ

* ವಾಹಕದ ತಾಪ

**13. ವಿಭವಾಂತರದ ಅಂತರಾಷ್ಟ್ರೀಯ ಏಕಮಾನ ಯಾವುದು? ವಿಭವಾಂತರವನ್ನು ಅಳೆಯಲು ಬಳಸುವ ಸಾಧನವನ್ನು ಹೆಸರಿಸಿ.**

ವಿಭವಾಂತರದ ಅಂತರಾಷ್ಟ್ರೀಯ ಏಕಮಾನ – ವೋಲ್ಟ್.

ವಿಭವಾಂತರವನ್ನು ಅಳೆಯಲು ಬಳಸುವ ಸಾಧನ – ವೋಲ್ಟ್ ಮೀಟರ್.

**14. ಜೌಲನ ಉಷ್ಣೋತ್ಪಾದನ ನಿಯಮವನ್ನು ನಿರೂಪಿಸಿ. ವಿದ್ಯುತ್ ತಂತುದೀಪದ ಕಾರ್ಯವಿಧಾನವನ್ನು ವಿವರಿಸಿ.**

ಜೌಲನ ಉಷ್ಣೋತ್ಪಾದನಾ ನಿಯಮದ ಪ್ರಕಾರ ರೋಧಕದಲ್ಲಿ ಉತ್ಪತ್ತಿಯಾಗುವ ಉಷ್ಣವು –

(i) ಕೊಟ್ಟಿರುವ ರೋಧದಲ್ಲಿ ಪ್ರವಹಿಸುತ್ತಿರುವ ವಿದ್ಯುತ್‌ಪ್ರವಾಹದ ವರ್ಗಕ್ಕೆ ನೇರಾನುಪಾತದಲ್ಲಿರುತ್ತದೆ.

(ii) ಕೊಟ್ಟಿರುವ ವಿದ್ಯುತ್ ಪ್ರವಾಹಕ್ಕೆ, ರೋಧವು ನೇರ ಅನುಪಾತದಲ್ಲಿರುತ್ತದೆ.

(iii) ರೋಧಕಗಳ ಮೂಲಕ ಹರಿಯುವ ವಿದ್ಯುತ್‌ಪ್ರವಾಹದ ಕಾಲಕ್ಕೆ ನೇರ ಅನುಪಾತದಲ್ಲಿರುತ್ತದೆ.

* ವಿದ್ಯುತ್ ಬಲ್ಬ್‌ನಲ್ಲಿ ಬಳಸುವ ಟಂಗಸ್ಟನ್ ಅತ್ಯಧಿಕ ರೋಧವನ್ನು ಹೊಂದಿರುತ್ತದೆ. ಇದರಿಂದಾಗಿ ತಂತಿಯಲ್ಲಿ ಹೆಚ್ಚಿನ ಉಷ್ಣ ಉತ್ಪಾದನೆಯಾಗಿ ಬೆಳಕು ಉತ್ಸರ್ಜಿಸುತ್ತದೆ.

**15. ಓಮ್‌ನ ನಿಯಮವನ್ನು ನಿರೂಪಿಸಿ. ವಿದ್ಯುತ್ ಮಂಡಲದಲ್ಲಿ ಅಮ್ಮೀಟರ್ ಮತ್ತು ವೋಲ್ಟ್ ಮೀಟರ್‌ಗಳನ್ನು ಹೇಗೆ ಸಂಪರ್ಕಿಸುತ್ತಾರೆ? ವಿದ್ಯುನ್ಮಂಡಲದಲ್ಲಿ ಈ ಉಪಕರಣಗಳ ಉಪಯೋಗವೇನು?**

ಸ್ಥಿರ ತಾಪದಲ್ಲಿ ವಾಹಕ ತಂತಿಯ ತುದಿಗಳ ನಡುವಿನ ವಿಭವಾಂತರವು ಅದರ ಮೂಲಕ ಹರಿಯುವ ವಿದ್ಯುತ್ ಪ್ರವಾಹಕ್ಕೆ ನೇರ ಅನುಪಾತದಲ್ಲಿರುತ್ತದೆ.

* ಅಮ್ಮೀಟರನ್ನು ವಿದ್ಯುತ್ ಮಂಡಲದಲ್ಲಿ ಯಾವಾಗಲೂ ಸರಣಿ ಕ್ರಮದಲ್ಲಿ ಅಳವಡಿಸಿರುತ್ತಾರೆ.

* ವೋಲ್ಟ್ ಮೀಟರನ್ನು ವಿದ್ಯುತ್ ಮಂಡಲದಲ್ಲಿ ಯಾವಾಗಲೂ ಸಮಾಂತರ ಕ್ರಮದಲ್ಲಿ ಅಳವಡಿಸಿರುತ್ತಾರೆ.

* ಅಮ್ಮೀಟರ್ ಅನ್ನು ಮಂಡಲದಲ್ಲಿನ ವಿದ್ಯುತ್ ಪ್ರವಾಹವನ್ನು ಅಳೆಯಲು ಉಪಯೋಗಿಸುತ್ತಾರೆ

* ವೋಲ್ಟ್ ಮೀಟರನ್ನು ವಿದ್ಯುತ್ ಮಂಡಲದಲ್ಲಿನ ವಿಭವಾಂತರವನ್ನು ಅಳೆಯಲು ಉಪಯೋಗಿಸುತ್ತಾರೆ

**16. ವಿದ್ಯುತ್ ಪ್ರವಾಹ ಎಂದರೇನು? ವಿದ್ಯುತ್ ಪ್ರವಾಹವನ್ನು ಅಳೆಯಲು ಬಳಸುವ ಸಾಧನ ಹೆಸರಿಸಿ.**

ಒಂದು ಏಕಮಾನ ಸಮಯದಲ್ಲಿ ಒಂದು ನಿರ್ದಿಷ್ಟ ಕ್ಷೇತ್ರದ ಮೂಲಕ ಪ್ರವಹಿಸುವ ಆವೇಶಗಳ ಪರಿಮಾಣವನ್ನು ವಿದ್ಯುತ್ ಪ್ರವಾಹ ಎನ್ನುವರು.

ವಿದ್ಯುತ್ ಪ್ರವಾಹವನ್ನು ಅಳೆಯಲು ಬಳಸುವ ಸಾಧನ – ಅಮ್ಮೀಟರ್

**17. ವಿದ್ಯುತ್ ಉಪಕರಣಗಳನ್ನು ಸರಣಿ ಕ್ರಮದಲ್ಲಿ ಜೋಡಿಸುವ ಬದಲು ಸಮಾಂತರ ಕ್ರಮದಲ್ಲಿ ಜೋಡಿಸುವದರಿಂದಾಗುವ ಲಾಭವೇನು?**

* ಸಮಾಂತರ ಜೋಡಣೆಯಲ್ಲಿ ವಿದ್ಯುತ್ ಉಪಕರಣಗಳಮೂಲಕ ಹರಿಯುವ ವಿದ್ಯುತ್ ವಿಭಜಿಸುತ್ತದೆ.

* ಸಮಾಂತರ ಜೋಡಣೆಯಲ್ಲಿ ವಿದ್ಯುತ್ ರೋಧ ಕಡಿಮೆ.

* ಈ ಜೋಡಣೆಯಲ್ಲಿ ಒಂದು ಉಪಕರಣ ಹಾಳಾದರೆ ಉಳಿದವುಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.

**18. ಉಷ್ಣೋತ್ಪಾದನ ವಿದ್ಯುತ್ ಸಾಧನಗಳಲ್ಲಿ ಮಿಶ್ರಲೋಹಗಳನ್ನು ಬಳಸಲು ಕಾರಣವೇನು?**

ಮಿಶ್ರಲೋಹಗಳು ತಮ್ಮ ಘಟಕ ಲೋಹಗಳಿಗಿಂತ ಹೆಚ್ಚಿನ ದ್ರವನ ಬಿಂದು ಹೊಂದಿರುತ್ತವೆ.

**19. ಒಂದು ವಾಹಕ ಉದ್ದ ಹಾಗೂ ಅಡ್ಡಕೊಯ್ತ (ದಪ್ಪ) ಇವು ಅದರ ರೋಧವನ್ನು ಹೇಗೆ ಪ್ರಭಾವಿಸುತ್ತವೆ?**

* ವಾಹಕದ ಉದ್ದವು ಅದರ ರೋಧಕ್ಕೆ ನೇರ ಅನುಪಾತದಲ್ಲಿರುತ್ತದೆ. ಆದ್ದರಿಂದ ವಾಹಕದ ಉದ್ದ ಹೆಚ್ಚಾದಂತೆ ಅದರ ರೋಧವೂ ಹೆಚ್ಚುತ್ತದೆ.

* ವಾಹಕದ ಅಡ್ಡಕೊಯ್ತ (ದಪ್ಪ) ಅದರ ರೋಧಕ್ಕೆ ವಿಲೋಮಾನುಪಾತದಲ್ಲಿರುತ್ತದೆ. ಆದ್ದರಿಂದ ವಾಹಕದ ಅಡ್ಡಕೊಯ್ತ (ದಪ್ಪ) ಹೆಚ್ಚಾದಂತೆ ಸದರ ರೋಧ ಕಡಿಮೆಯಾಗುತ್ತದೆ.

**20. ವಿದ್ಯುತ್ ವಿಭವಾಂತರವನ್ನು ನಿರೂಪಿಸಿ. ವಾಹಕದ ಮೂಲಕ ವಿಭವಾಂತರವನ್ನು ನಿರ್ವಹಿಸಲು ಸಹಾಯ ಮಾಡುವ ಸಾಧನವನ್ನು ಹೆಸರಿಸಿ.**

ಒಂದು ಏಕಮಾನ ಆವೇಶವನ್ನು ಒಂದು ಬಿಂದುವಿನಿಂದ ಇನ್ನೊಂದು ಬಿಂದುವಿಗೆ ತರವಲ್ಲಿ ನಡೆದ ಕೆಲಸವನ್ನು ವಿಭವಾಂತರ ಎನ್ನುವರು.

ವಾಹಕದ ಮೂಲಕ ವಿಭವಾಂತರವನ್ನು ನಿರ್ವಹಿಸಲು ಸಹಾಯ ಮಾಡುವ ಸಾಧನ : ಶುಷ್ಕಕೋಶ ಅಥವಾ ಬ್ಯಾಟರಿ

**21. ಒಂದೇ ರೀತಿಯ ವಸ್ತುವಿನ ದಪ್ಪವಾದ ತಂತಿ ಅಥವಾ ತೆಳುವಾದ ತಂತಿಯನ್ನು ಒಂದೇ ಮೂಲಕ್ಕೆ ಸಂಪರ್ಕಿಸಿದಾಗ ಯಾವ ತಂತಿಯ ಮೂಲಕ ವಿದ್ಯುತ್ ಸುಲಭವಾಗಿ ಹರಿಯುತ್ತದೆ? ಮತ್ತು ಹೇಗೆ?**

* ತಂತಿಯ ದಪ್ಪ ಹೆಚ್ಚಾದಂತೆ ಅದರ ರೋಧ ಕಡಿಮೆಯಾಗುತ್ತದೆ ಮತ್ತು ತೆಳುವಾದಂತೆ ಅದರ ರೋಧ ಹೆಚ್ಚಾಗುತ್ತದೆ. ಆದ್ದರಿಂದ ದಪ್ಪವಾದ ತಂತಿಯ ಮೂಲಕ ವಿದ್ಯುತ್ ಸುಲಭವಾಗಿ ಹರಿಯುತ್ತದೆ.

* ತಂತಿಯ ದಪ್ಪ ಹೆಚ್ಚಾದಂತೆ ವಿದ್ಯುದಾವೇಶಗಳು ಸುಲಭವಾಗಿ ಪ್ರವಹಿಸುತ್ತವೆ.

**22. ತಾಪನ ಘಟಕಗಳು ಹೊಳೆಯುವಂತೆ ವಿದ್ಯುತ್ ಹೀಟರ್‌ನ ಸುರುಳಿಯು ಏಕೆ ಹೊಳೆಯುವುದಿಲ್ಲ.**

* ತಾಪಮಾನ ಘಟಕಗಳು ಹೆಚ್ಚಿನ ರೋಧವನ್ನು ಹೊಂದಿದ್ದು ಜೌಲನ ಉಷ್ಣೋತ್ಪಾದನ ನಿಯಮದನ್ವಯ ಅಲ್ಲಿ ಹೆಚ್ಚಿನ ಉಷ್ಣ ಉತ್ಪತ್ತಿಯಾಗುವುದರಿಂದ ಅವು ಉಷ್ಣದ ಜೊತೆಗೆ ಹೆಚ್ಚು ಬೆಳಕನ್ನು ಉತ್ಸರ್ಜಿಸುತ್ತವೆ.

* ತಾಪಮಾನ ಘಟಕಗಳಿಗೆ ಹೋಲಿಸಿದರೆ ವಿದ್ಯುತ್ ಹೀಟರ್ ಕಡಿಮೆ ರೋಧ ಹೊಂದಿದ್ದು ಅಲ್ಲಿ ಉತ್ಪತ್ತಿಯಾಗುವ ಉಷ್ಣವು ಕಡಿಮೆ ಇರುತ್ತದೆ.